ಮುದ್ದೇಬಿಹಾಳ ತಾಲ್ಲೂಕಿನಲ್ಲಿ ಪ್ರಾಥಮಿಕ ಹಾಗೂ ಪ್ರೌಢಶಾಲೆಗಳ ಕೊರತೆ

264 (703) ಶ್ರೀ ಅಪ್ಪಾಜಿ @ ಚನ್ನಬಸವರಾಜ್ ಶಂಕರರಾವ್ ನಾಡಗೌಡ (ಮುದ್ದೇಬಿಹಾಳ) : ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬಿಜಾಪುರ ಜಿಲ್ಲೆ, ಮುದ್ದೇಬಿಹಾಳ ತಾಲ್ಲೂಕಿನಲ್ಲಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ;

ಆ) ಹಾಗಿದ್ದಲ್ಲಿ, ಬಿಜಾಪುರ ಜಿಲ್ಲೆಯ ಮುದ್ದೇಬಿಹಾಳ ತಾಲ್ಲೂಕಿನಲ್ಲಿ 2010-11ನೇ ಸಾಲಿನಲ್ಲಿ ಯಾವ ಯಾವ ಗ್ರಾಮಗಳಲ್ಲಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳನ್ನು ತೆರೆಯಲಾಗುವುದು;

ಇ) ಇವುಗಳ ಪೈಕಿ ಹೆಣ್ಣು ಮಕ್ಕಳ ಶಾಲೆಗಳೆಷ್ಟು?

ಶ್ರೀ ವಿಶ್ವೇಶ್ವರ ಹೆಗಡೆ ಕಾಗೇರಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) :

ಅ) ಬಂದಿದೆ.

ಆ) ಅನುದಾನದ ಲಭ್ಯತೆ ಆಧರಿಸಿ ಅಗತ್ಯವಿರುವೆಡೆ ಮುಂದಿನ ವರ್ಷಗಳಲ್ಲಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳನ್ನು ತೆರೆಯಲಾಗುವುದು.

ಇ) ಉದ್ಭವಿಸುವುದಿಲ್ಲ.

ಭೋಧಕೇತರ ಸಿಬ್ಬಂದಿಯನ್ನು ಅನುದಾನ ಸಹಿತ ಖಾಯಂಗೊಳಿಸುವುದು

265 (336) ಶ್ರೀ ಅಪ್ಪಾಸಾಹೇಬ (ಅಪ್ಪು), ಮಲ್ಲಪ್ಪ ಪಟ್ಟಣಶೆಟ್ಟಿ : ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಖಾಸಗಿ ಅನುದಾನಿತ ಪ್ರಾಥಮಿಕ, ಪ್ರೌಢಶಾಲೆ ಹಾಗೂ ಪದವಿ ಪೂರ್ವ ಕಾಲೇಜುಗಳಲ್ಲಿ ಭೋದಕೇತರ ಸಿಬ್ಬಂದಿಯನ್ನು ಖಾಯಂ ಗೊಳಿಸಲು ಅನುಸರಿಸುವ ಮಾನದಂಡಗಳೇನು;

ಆ) ಪ್ರತಿ ಶಾಲೆ/ ಕಾಲೇಜಿಗೆ ಎಷ್ಟು ಭೋದಕೇತರ ಸಿಬ್ಬಂದಿಯನ್ನು ಅನುದಾನ ಸಹಿತ ಖಾಯಂಗೊಳಿಸಲಾಗುವುದು (ವಿವರ ನೀಡುವುದು);

ಇ) 1994 ರಿಂದ ಭೋದಕೇತರ ಸಿಬ್ಬಂದಿಗಳಿಗೆ ಅನುದಾನ ಸಹಿತ ಅನುಮೋದನೆ ನೀಡಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ;

ಈ) ವಿದ್ಯಾರ್ಥಿಗಳ ಸಂಖ್ಯೆಗೆ ಅನುಗುಣವಾಗಿ ಸದರಿಯವರನ್ನು ಖಾಯಂಗೊಳಿಸದೇ ಇರಲು ಕಾರಣವೇನು;

ಉ) ಸದರಿ ಸಿಬ್ಬಂದಿಗಳ ಕೊರತೆಯಿಂದ ಹೆಚ್ಚು ವಿದ್ಯಾರ್ಥಿಗಳು ಇರುವ ಶಾಲಾ ಕಾಲೇಜುಗಳ ಅನುದಾನಿತ ಸುಧಾರಣೆಗೆ ಅಡಚಣೆ ಉಂಟಾಗುವುದಿಲ್ಲವೆ;

ಊ) ಈ ವಿದ್ಯಾರ್ಥಿಗಳ ಸಂಖ್ಯೆಗೆ ಅನುಗುಣವಾಗಿ ಭೋದಕೇತರ ಸಿಬ್ಬಂದಿ ನೇಮಕಾತಿ ಮಾಡುವ ಬಗ್ಗೆ ಈ ಹಿಂದೆ ನೀಡಿದ್ದ ಆದೇಶವನ್ನು ತಡೆಹಿಡಿಯಲು ಕಾರಣವೇನು;

ಋ) ಅಲ್ಲಿ ಸೇವೆ ಸಲ್ಲಿಸುತ್ತಿರುವ ಭೋದಕೇತರ ಸಿಬ್ಬಂದಿಗಳಿಗೆ ಸರ್ಕಾರ ಕೈಗೊಂಡ ಕ್ರಮಗಳೇನು?

ಶ್ರೀ ವಿಶ್ವೇಶ್ವರ ಹೆಗಡೆ ಕಾಗೇರಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) :

ಅ) ಪ್ರಾಥಮಿಕ ಶಾಲೆಗಳಲ್ಲಿ ಬೋಧಕೇತರ ಸಿಬ್ಬಂದಿಗಳು ಇರುವುದಿಲ್ಲ.

ಪ್ರೌಢಶಾಲೆ ಹಾಗೂ ಪದವಿ ಪೂರ್ವ ಕಾಲೇಜುಗಳಲ್ಲಿ ಆಡಳಿತ ಮಂಡಳಿಗಳು ನಿಯಮಾನುಸಾರ ನೇಮಕಾತಿ ಮಾಡಿಕೊಂಡಿರು ಬೋಧಕೇತರ ಸಿಬ್ಬಂದಿಯ ನೇಮಕಾತಿಯನ್ನು ಸಕ್ಷಮ ಪ್ರಾಧಿಕಾರವು ಅನುದಾನ ರಹಿತವಾಗಿ ಅನುಮೋದಿಸಿದ್ದಲ್ಲಿ ಅಂತಹ ಬೋಧಕೇತರ ಸಿಬ್ಬಂದಿಗಳನ್ನು ಸಹಾಯಾನುದಾನಕ್ಕೆ ಒಳಪಡಿಸಲು ಪರಿಶೀಲಿಸಿ ಕ್ರಮಕೈಗೊಳ್ಳಲಾಗುವುದು.

ಆ) ಪ್ರಸ್ತುತ ಜಾರಿಯಲ್ಲಿರುವ ಸಿಬ್ಬಂದಿ ಮಾದರಿಯ ರಚನೆಯಂತೆ ಪ್ರೌಢಶಾಲೆಗಳಿಗೆ ಒಂದು ದ್ವಿತೀಯ ದರ್ಜೆ ಸಹಾಯಕ ಹಾಗೂ ಒಂದು ಗ್ರೂಪ್ – ಡಿ ಹುದ್ದೆಗೆ ಅವಕಾಶವಿದೆ. ಪದವಿ ಪೂರ್ವ ಕಾಲೇಜುಗಳಲ್ಲಿ ಒಂದು ಪ್ರಥಮ ದರ್ಜೆ ಸಹಾಯಕ / ದ್ವಿತೀಯ ದರ್ಜೆ ಸಹಾಯಕ ಮತ್ತು ಒಂದು ಗ್ರೂಪ್ – ಡಿ ಹುದ್ದೆಗಳನ್ನು ತುಂಬಲು ಅವಕಾಶವಿದೆ.

ಇ) ಆರ್ಥಿಕ ಮಿತವ್ಯಯ ಆದೇಶ ಜಾರಿಯಲ್ಲಿರುತ್ತದೆ. ಈ ಆದೇಶವನ್ನು ಸಡಿಲಿಸಿದ ನಂತರ ಈ ಬಗ್ಗೆ ಕ್ರಮವಹಿಸಲಾಗುವುದು.

ಈ) ಪ್ರಸ್ತುತ ಜಾರಿಯಲ್ಲಿರುವ ಸಿಬ್ಬಂದಿ ಮಾದರಿ ರಚನೆಯಂತೆ ಬೋಧಕೇತರ ಹುದ್ದೆಗಳಿಗೆ ಅನುಮೋದನೆ ನೀಡಲಾಗುವುದು. ಸಧ್ಯಕ್ಕೆ ಆರ್ಥಿಕ ಮಿತವ್ಯಯ ಆದೇಶ ಜಾರಿಯಲ್ಲಿರುತ್ತದೆ. ಈ ಆದೇಶವನ್ನು ಸಡಿಲಿಸಿದ ನಂತರ ಈ ಬಗ್ಗೆ ಕ್ರಮವಹಿಸಲಾಗುವುದು.

ಉ) ಆಡಳಿತ ಮಂಡಳಿಯವರು ತಾತ್ಕಲಿಕ ವ್ಯವಸ್ಥೆ ಮಾಡಿಕೊಳ್ಳುವುದರಿಂದ ಆಡಚಣೆ ಆಗುವುದಿಲ್ಲ.

ಊ) ಪ್ರಸ್ತುತ ಜಾರಿಯಲ್ಲಿರುವ ಸಿಬ್ಬಂದಿ ಮಾದರಿಯ ರಚನೆಯಂತೆ ಪ್ರೌಢಶಾಲೆಗಳಿಗೆ ಒಂದು ದ್ವಿತೀಯ ದರ್ಜೆ ಸಹಾಯಕ ಹಾಗೂ ಒಂದು ಗ್ರೂಪ್–ಡಿ ಹುದ್ದೆಗೆ ಅವಕಾಶವಿದೆ. ಪದವಿ ಪೂರ್ವ ಕಾಲೇಜುಗಳಲ್ಲಿ ಒಂದು ಪ್ರಥಮ ದರ್ಜೆ ಸಹಾಯಕ / ದ್ವಿತೀಯ ದರ್ಜೆ ಸಹಾಯಕ ಮತ್ತು ಒಂದು ಗ್ರೂಪ್–ಡಿ ಹುದ್ದೆಗಳನ್ನು ತುಂಬಲು ಮಾತ್ರ ಅವಕಾಶವಿದೆ.

ಋ) ಆರ್ಥಿಕ ಮಿತವ್ಯಯ ಆದೇಶ ಜಾರಿಯಲ್ಲಿರುವುದರಿಂದ ಸದರಿ ಆದೇಶವನ್ನು ಸಡಿಲಿಸಿದ ನಂತರ ಈ ಬಗ್ಗೆ ಪರಿಶೀಲಿಸಿ ಕ್ರಮ ತೆಗೆದು ಕೊಳ್ಳಲಾಗುವುದು.

ಕೋಲಾರ ಜಿಲ್ಲೆಯ ಶ್ರೀನಿವಾಸಪುರ ತಾಲ್ಲೂಕಿನ ಕಳ್ಳಭಟ್ಟಿ ದುರಂತದ ಬಗ್ಗೆ

268 (587) : ಶ್ರೀ ಬಚ್ಚೇಗೌಡ ಕೆ.ಪಿ. (ಚಿಕ್ಕಬಳ್ಳಾಪುರ) : ಮಾನ್ಯ ಅಬಕಾರಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಇತ್ತೀಚೆಗೆ ಕೋಲಾರ ಜಿಲ್ಲೆಯ ಶ್ರೀನಿವಾಸಪುರ ತಾಲ್ಲೂಕಿನಲ್ಲಿ ಕಳ್ಳಬಟ್ಟಿ ಕುಡಿದು ಅಮಾಯಕ ಜನರು ಸತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಈ ಕಳ್ಳಭಟ್ಟಿ ದುರಂತದಿಂದ ಸತ್ತವರ ಸಂಖ್ಯೆ ಎಷ್ಟು ಮತ್ತು ಯಾರ್ಯಾರು (ವಿವರಗಳನ್ನು ನೀಡುವುದು);

ಇ) ಕಳ್ಳಭಟ್ಟಿ ದುರಂತಕ್ಕೆ ಕಾರಣರಾದವನ್ನು ಸರ್ಕಾರ ಬಂಧಿಸಿದೆಯೇ;

ಈ) ಹಾಗಿದ್ದಲ್ಲಿ, ಇದಕ್ಕೆ ಕಾರಣರಾದವರ ವಿರುದ್ಧ ಸರ್ಕಾರ ಯಾವ ರೀತಿಯ ಕ್ರಮಗಳನ್ನು ಕೈಗೊಂಡಿದೆ.

ಉ) ಕಳ್ಳಭಟ್ಟಿ ದುರಂತದಿಂದ ಸತ್ತವರ ಕುಟುಂಬಗಳಿಗೆ ಸರ್ಕಾರ ಪರಿಹಾರ ಧನವನ್ನು ನೀಡಿದೆಯೇ;